# ಲಿಪಿಕಾರರ ವಿವರ ಕೇಳಿದ ಕೋರ್ಟ್

ಉವಾ 8/9/20

ಬೆಂಗಳೂರು: ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ಭರ್ತಿಗೆ ಕಳೆದ ಆ. 24ರಂದು ನಡೆದ ಪೂರ್ವಭಾವಿ ಪರೀಕ್ಷೆಯಲ್ಲಿ ಭಾಗಿಯಾಗಿದ್ದ ಅಂಧ ಅಭ್ಯರ್ಥಿಗಳ ವಿವರ ನೀಡುವಂತೆ ಕರ್ನಾಟಕ ಲೋಕಸೇವಾ ಆಯೋಗಕ್ಕೆ (ಕೆಪಿಎಸ್‌ಸಿ) ಹೈಕೋರ್ಟ್ ನಿರ್ದೇಶನ ನೀಡಿದೆ.

ಅಂಧ ಅಭ್ಯರ್ಥಿಗಳಿಗೆ ಕೆಪಿಎಸ್ಸಿ ವತಿಯಿಂದ ಸ್ಕ್ರೈಬ್ (ಲಿಪಿಕಾರರು) ಒದಗಿಸದ ಕ್ರಮ ಪ್ರಶ್ನಿಸಿ ದಿ ನ್ಯಾಷನಲ್ ಫೆಡರೇಷನ್ ಆಫ್ ಬ್ಲೈಂಡ್ ಸ್ವಯಂ ಸೇವಾ ಸಂಸ್ಥೆ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕ್ ನೇತೃತ್ವದ ವಿಭಾಗೀಯ ನ್ಯಾಯಪೀಠ ಸೋಮವಾರ ವಿಚಾರಣೆ ನಡೆಸಿತು.


- **ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ಭರ್ತಿಗೆ ಕಳೆದ ಆ. 24ರಂದು ನಡೆದ ಪೂರ್ವಭಾವಿ ಪರೀಕ್ಷೆ**
- **ಎಷ್ಟು ಅಭ್ಯರ್ಥಿಗಳು ಆಯೋಗದ ವತಿಯಿಂದ ಒದಗಿಸಿದ ಲಿಪಿಕಾರರನ್ನು ಬಳಸಿಕೊಂಡಿದ್ದಾರೆ, ಅವರ ವಿದ್ಯಾರ್ಹತೆ ಏನು ಎಂಬ ಬಗ್ಗೆ ವಿವರ ನೀಡುವಂತೆ ಕೆಪಿಎಸ್ಸಿ ಪರ ವಕೀಲರಿಗೆ ಸೂಚಿಸಿದ ಕೋರ್ಟ್**

ಈ ವೇಳೆ ಕೆಪಿಎಸ್ಸಿ ಪರ ವಕೀಲರ ರುಬೇನ್ ಜಾಕಬ್ ವಾದ ಮಂಡಿಸಿ, ಪೂರ್ವಭಾವಿ ಪರೀಕ್ಷೆ ಬರೆದ ಅಂಧ ಅಭ್ಯರ್ಥಿಗಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿ ಪ್ರಕಾರ ಪ್ರತಿ ಗಂಟೆಗೆ 20 ನಿಮಿಷ ಹೆಚ್ಚುವರಿ ಕಾಲಾವಕಾಶ ನೀಡಲಾಗಿದೆ. ಜತೆಗೆ ಲಿಪಿಕಾರರನ್ನು ಕೋರಿದ್ದ ಅಭ್ಯರ್ಥಿಗಳಿಗೆ ಆಯೋಗದ ವತಿಯಿಂದಲೇ ಸ್ಕ್ರೈಬ್‌ಗಳನ್ನು ಒದಗಿಸಲಾಗಿದೆ ಎಂದು ವಿವರಿಸಿದರು.

ಅರ್ಜಿದಾರರ ಪರ ಹಿರಿಯ ವಕೀಲೆ ಜೈನಾ ಕೊಠಾರಿ ವಾದ ಮಂಡಿಸಿ, ಅಂಧ ಅಭ್ಯರ್ಥಿಗಳಿಗೆ ಹೆಚ್ಚುವರಿ ಕಾಲಾವಕಾಶ ನೀಡಲಾಗಿದೆ. ಆದರೆ, ಕೆಪಿಎಸ್ಸಿ ಒದಗಿಸಿದ್ದ ಸ್ಕ್ರೈಬ್‌ಗಳ ವಿದ್ಯಾರ್ಹತೆ ಕೇಂದ್ರ ಸರ್ಕಾರದ ನಿಯಮಗಳಿಗೆ ಅನುಗುಣವಾಗಿರಲಿಲ್ಲ. ಕೋವಿಡ್ ಹಿನ್ನೆಲೆಯಲ್ಲಿ ಬಹಳಷ್ಟು ಜನ ಸ್ಕ್ರೈಬ್‌ಗಳು ಪರೀಕ್ಷೆಗೆ ಲಭ್ಯವಾಗಲಿಲ್ಲ. ಇದರಿಂದ ಲಿಪಿಕಾರರನ್ನು ಒದಗಿಸಲು ಕೆಪಿಎಸ್‌ಸಿಗೆ ಮನವಿ ಮಾಡಲಾಗಿತ್ತು. ಲಿಪಿಕಾರರಿಗೆ ಕೇಂದ್ರದ ನಿಯಮದಲ್ಲಿ ಹೇಳಲಾಗಿರುವ ವಿದ್ಯಾರ್ಹತೆ ಇಲ್ಲದ ಕಾರಣ, ಅಭ್ಯರ್ಥಿಗಳು ತೊಂದರೆ ಅನುಭವಿಸುವಂತಾಯಿತು ಎಂದು ನ್ಯಾಯಪೀಠಕ್ಕೆ ತಿಳಿಸಿದರು.

ಅದಕ್ಕೆ ನ್ಯಾಯಪೀಠ, ಒಟ್ಟು ಎಷ್ಟು ಮಂದಿ ಅಂಧ ಅಭ್ಯರ್ಥಿಗಳು ಪರೀಕ್ಷೆ ತೆಗೆದುಕೊಂಡಿದ್ದರು, ಎಷ್ಟು ಮಂದಿ ಪರೀಕ್ಷೆಗೆ ಹಾಜರಾದರು, ಅವರಲ್ಲಿ ಎಷ್ಟು ಜನ ತಾವಾಗಿಯೇ ಸ್ಕ್ರೈಬ್‌ಗಳನ್ನು ಕರೆತಂದಿದ್ದರು ಹಾಗೂ ಅವರ ವಿದ್ಯಾರ್ಹತೆ ಏನು ಎಂಬ ಬಗ್ಗೆ ಸೆ.28ರೊಳಗೆ ವಿವರ ನೀಡುವಂತೆ ಕೆಪಿಎಸ್ಸಿ ಪರ ವಕೀಲರಿಗೆ ಸೂಚಿಸಿ ಸೆ.30ಕ್ಕೆ ವಿಚಾರಣೆ ಮುಂದೂಡಿತು.

## ಏಕಸದಸ್ಯ ನ್ಯಾಯಪೀಠದ ಆದೇಶ ಪ್ರಶ್ನಿಸಿ ಮೇಲ್ಮನವಿ ಸಲ್ಲಿಕೆ



ಬೆಂಗಳೂರು: ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ಎಸ್.ಮೂರ್ತಿ ಅವರನ್ನು ಅಮಾನತುಗೊಳಿಸಿದ ಆದೇಶ ನಿಯಮ ಬಾಹಿರವಾಗಿರುವ ಕಾರಣ ಪ್ರಕರಣದಲ್ಲಿನ ಶಿಸ್ತುಕ್ರಮ ವಿಚಾರಣಾ ಸಮಿತಿಯ ಫಲಿತಾಂಶದ ಆಧಾರದ ಮೇಲೆ ನೂರು ವಾರದೊಳಗೆ ಮೂರ್ತಿ ಅವರನ್ನು ಮರು ನೇಮಕ ಮಾಡಬೇಕು ಎಂದು ಹೈಕೋರ್ಟ್ ಏಕ ಸದಸ್ಯ ನ್ಯಾಯಪೀಠ ನೀಡಿದ ಆದೇಶ ಪ್ರಶ್ನಿಸಿ ಮೇಲ್ಮನವಿ ಸಲ್ಲಿಸಲಾಗಿದೆ.

ಈ ಕುರಿತು ವಿಧಾನಸಭೆ ವಿಶೇಷ ಮಂಡಳಿ, ವಿಧಾನಸಭೆ ಸ್ಪೀಕರ್ ಹಾಗೂ ವಿಧಾನಸಭೆ ಕಾರ್ಯದರ್ಶಿ ಅವರು ಸಲ್ಲಿಸಿರುವ ಮೇಲ್ಮನವಿಯು ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ್ ಅವರ ನೇತೃತ್ವದ ವಿಭಾಗೀಯ ನ್ಯಾಯಪೀಠದ ಮುಂದೆ ಸೋಮವಾರ ವಿಚಾರಣೆಗೆ ಬಂದಿತ್ತು. ಸದ್ಯ ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ಅಮಾನತ್ತಿನಲ್ಲಿರುವ ಎಸ್.ಮೂರ್ತಿ ಅವರನ್ನು ಅರ್ಜಿಯಲ್ಲಿ ಪ್ರತಿವಾದಿಯನ್ನಾಗಿ ಮಾಡಲಾಗಿದೆ.

ಮೇಲ್ಮನವಿದಾರರ ಪರ ಅಡ್ವೋಕೇಟ್ ಜನರಲ್ ಪ್ರಭುಲಿಂಗ ಕೆ. ನಾವದಗಿ ಹಾಗೂ ಪ್ರತಿವಾದಿ ಎಸ್. ಮೂರ್ತಿ ಪರ ಹಿರಿಯ ನ್ಯಾಯವಾದಿ ಎ.ಎಸ್. ಪೊನ್ನಣ್ಣ ವಾದ ಮಂಡಿಸಿದರು. ವಾದ ಪ್ರತಿವಾದ ಆಲಿಸಿದ ನ್ಯಾಯಪೀಠ, ಏಕಸದಸ್ಯ ನ್ಯಾಯಪೀಠದ ಆದೇಶಕ್ಕೆ ತಡೆ ನೀಡಬೇಕು ಎಂಬ ಮೇಲ್ಮನವಿದಾರರ ಮಧ್ಯಂತರ ಮನವಿಯನ್ನು ಈ ಹಂತದಲ್ಲಿ ಪರಿಗಣಿಸಲು ಸಾಧ್ಯವಿಲ್ಲ, ಪ್ರತಿವಾದಿಗಳ ವಿರುದ್ಧ ಇಲಾಖಾ ವಿಚಾರಣೆ ಹಾಗೂ ಚಾರ್ಜ್‌ಶೀಟ್‌ಗೆ ನೀಡಿರುವ ತಡೆಯನ್ನು ತೆರವುಗೊಳಿಸುವ ಸಂಬಂಧ ಮನವಿ ಸಲ್ಲಿಸಿ, ಏಕ ಸದಸ್ಯ ನ್ಯಾಯಪೀಠದಲ್ಲಿನ ವಿಚಾರಣೆಯ ಅಂತಿಮ ಫಲಿತಾಂಶದ ಬಳಿಕ ಈ ಮೇಲ್ಮನವಿಯನ್ನು ವಿಚಾರಣೆಗೆ ಪರಿಗಣಿಸಲಾಗುವುದು. ಸದ್ಯ ಈ ಮೇಲ್ಮನವಿಯನ್ನು ಬಾಕಿ ಇರಿಸಲಾಗುವುದು ಎಂದು ಅಭಿಪ್ರಾಯಪಟ್ಟ ವಿಭಾಗೀಯ ನ್ಯಾಯಪೀಠ ಮೇಲ್ಮನವಿ ವಿಚಾರಣೆಯನ್ನು ಸೆ.28ಕ್ಕೆ ಮುಂದೂಡಿತು.

## ಡಿಕೆಶಿ ಮೇಲ್ಮನವಿ: ಸರ್ಕಾರಕ್ಕೆ ನೋಟಿಸ್

ಬೆಂಗಳೂರು: ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರ ನಿವಾಸಗಳ ಮೇಲೆ ಐಟಿ ಅಧಿಕಾರಿಗಳು ದಾಳಿ ನಡೆಸಿದ್ದ ಪ್ರಕರಣವನ್ನು ಸಿಬಿಐಗೆ ವಹಿಸಿದ ಸರ್ಕಾರದ ಕ್ರಮ ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿದ ಏಕ ಸದಸ್ಯ ನ್ಯಾಯಪೀಠದ ಆದೇಶ ಪ್ರಶ್ನಿಸಿ ಸಲ್ಲಿಸಲಾದ ಮೇಲ್ಮನವಿ ಸಂಬಂಧ ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ.

ಈ ಕುರಿತು ಏಕಸದಸ್ಯ ನ್ಯಾಯಪೀಠದ ಮುಂದೆ ಅರ್ಜಿದಾರರಾಗಿದ್ದ ಶಶಿಕುಮಾರ್ ಶಿವಣ್ಣ ಸಲ್ಲಿಸಿದ್ದ ಮೇಲ್ಮನವಿಯು ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕ್ ಅವರ ನೇತೃತ್ವದ ವಿಭಾಗೀಯ ನ್ಯಾಯಪೀಠದ ಮುಂದೆ ಸೋಮವಾರ ವಿಚಾರಣೆಗೆ ಬಂದಿತ್ತು.

ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರ ವಾದ ಆಲಿಸಿದ ನ್ಯಾಯಪೀಠ ಸರ್ಕಾರಕ್ಕೆ ನೋಟಿಸ್ ಜಾರಿಗೊಳಿಸಿ ವಿಚಾರಣೆಯನ್ನು ಸೆ.29ಕ್ಕೆ ಮುಂದೂಡಿತು. ಅರ್ಜಿಯಲ್ಲಿ ರಾಜ್ಯ ಗೃಹ ಇಲಾಖೆ, ಸಿಬಿಐ ಅನ್ನು ಪ್ರತಿವಾದಿಯನ್ನಾಗಿ ಮಾಡಲಾಗಿದೆ. ಡಿ.ಕೆ. ಶಿವಕುಮಾರ್ ಹಾಗೂ ಇತರರ ವಿರುದ್ಧ ಐಟಿ ದಾಖಲಿಸಿಕೊಂಡಿರುವ ಪ್ರಕರಣಗಳ ತನಿಖೆಯನ್ನು ಸಿಬಿಐಗೆ ವಹಿಸಿ ರಾಜ್ಯ ಸರ್ಕಾರ 2019ರ ಸೆ. 29ರಂದು ಆದೇಶ ಹೊರಡಿಸಿತ್ತು. ಇದನ್ನು ಪ್ರಶ್ನಿಸಿ ಅರ್ಜಿ ಸಲ್ಲಿಸಲಾಗಿತ್ತು. 2020ರ ಜೂ.ರಂದು ಏಕಸದಸ್ಯ ನ್ಯಾಯಪೀಠ ಅರ್ಜಿಯನ್ನು ವಜಾಗೊಳಿಸಿತ್ತು. ಇದೀಗ ಏಕಸದಸ್ಯ ನ್ಯಾಯಪೀಠದ ಆದೇಶ ಪ್ರಶ್ನಿಸಿ ಮೇಲ್ಮನವಿ ಸಲ್ಲಿಸಲಾಗಿದೆ.